# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 55 | Pages. 2 | Date: 27-01-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 55 – ಪುಟಗಳು : 2 | 27-01-2026 | ಮಂಗಳವಾರ | Ph: 8762954248 | ದರ : ₹1


## ‘ಫಟ್ಟದ ರೊಟ್ಟಿ’ ಮಾರುಕಟ್ಟೆಗೆ ಪರಿಚಯ

### ಅಕ್ಷಮಾಲ ಫುಡ್ ಅಂಡ್ ಬಿವರೇಜಸ್‌ನ ಉತ್ಪನ್ನ | ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಕೃಷಿ ಹಾಗೂ ತೋಟಗಾರಿಕೆ ಇಲಾಖೆಯಿಂದ ನಗರದ ಹೊಸ ಬಸ್ ನಿಲ್ದಾಣ ಸಮೀಪದ ಹಾಸನಾಂಬ ಉದ್ಯಾನದಲ್ಲಿ ಹಮ್ಮಿಕೊಂಡಿರುವ ಎರಡು ದಿನಗಳ ಆಲೂಗಡ್ಡೆ ಹಾಗೂ ಸಿರಿಧಾನ್ಯ ಮೇಳದಲ್ಲಿ ಅಕ್ಷಮಾಲ ಫುಡ್ ಅಂಡ್ ಬಿವರೇಜಸ್ ಕಂಪನಿಯ ಫಟ್ಟದ ರೊಟ್ಟಿ ಉತ್ಪನ್ನ ಬಿಡುಗಡೆ ಮಾಡಲಾಯಿತು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಪಿ.ರಮೇಶ್‌ಕುಮಾರ್, ತೋಟಗಾರಿಕೆ ವಿಜ್ಞಾನಿಗಳಾದ ಡಾ.ಅಮರ ನಂಜುಂಡೇಶ್ವರ, ಡಾ.ನಟರಾಜು, ಕೃಷಿ ಅಧಿಕಾರಿ ಕೋಕಿಲಾ, ಆಕಾಶವಾಣಿಯ ಮಧುಸೂದನ್, ಡಾ. ಸರಳಾ ಖಾದರ್ ಮತ್ತಿತರ ಗಣ್ಯರು ಫಟ್ಟದ ರೊಟ್ಟಿಯನ್ನು ಬಿಗುಗಡೆ ಮಾಡಿದರು. ಅಕ್ಷಮಾಲ ಫುಡ್ ಅಂಡ್ ಬಿವರೇಜಸ್ ಕಂಪನಿಯ ಮಾಲೀಕರಾದ ಶ್ವೇತಾ ಮಂಜುನಾಥ್ ಅವರ ಸಾಧನೆ ಕುರಿತು ಕೃಷಿ ಇಲಾಖೆ ಅಧಿಕಾರಿ ಕೋಕಿಲಾ ಅವರು ಕೊಂಡಾಡಿದರು.

ಅಕ್ಷಮಾಲ ಕಂಪನಿಯು ಪ್ರಸ್ತುತ ವೇಗವಾಗಿ ಬೆಳೆಯುತ್ತಿರುವ ಸಂಸ್ಥೆಯಾಗಿದೆ. 10 ವರ್ಷಗಳ ಹಿಂದೆ ಶ್ವೇತಾ ಮಂಜುನಾಥ್ ಅವರು ಆರಂಭಿಸಿದ ಸಂಸ್ಥೆ ಇಂದು ದೊಡ್ಡದಾಗಿ ಬೆಳೆದಿದೆ. ಸಂಸ್ಥೆಯನ್ನು ಬೆಳೆಸಲು ಶ್ವೇತಾ ಅವರು ಸಾಕಷ್ಟು ಸವಾಲು ಎದುರಿಸಬೇಕಾಯಿತು. ಬೇರೆ ಯಾರಾದರೂ ಆಗಿದ್ದರೆ ಹಿಂದೆ ಸರಿಯುತ್ತಿದ್ದರು. ಆದರೆ ಶ್ವೇತಾ ಅವರು ಛಲ ಬಿಡದೆ ಪರಿಶ್ರಮ ವಹಿಸಿದರ ಪರಿಣಾಮ ಇಂದು ವಾರ್ಷಿಕ 80 ಲಕ್ಷದಿಂದ 1 ಕೋಟಿ ರೂ. ವರೆಗೆ ವಹಿವಾಟು ನಡೆಸುತ್ತಿದ್ದಾರೆ. ಗುಣಮಟ್ಟಕ್ಕೆ ಇವರ ಕಂಪನಿಯ ಪದಾರ್ಥಗಳು ಹೆಸರಾಗಿವೆ ಎಂದರು. ಕಂಪನಿಯಲ್ಲಿ ಮಹಿಳೆಯರಿಗೆ ಉದ್ಯೋಗಾವಕಾಶ ಕಲ್ಪಿಸಿದ್ದು ಸ್ತ್ರೀ ಸಬಲೀಕರಣಕ್ಕೆ ಆದ್ಯತೆ ನೀಡಿದ್ದಾರೆ. ಶ್ವೇತಾ ಅವರಿಗೆ ರಾಜ್ಯ ಮಟ್ಟದ ಪ್ರಶಸ್ತಿಯೂ



ಅರಸಿ ಬಂದಿದೆ. ಇವರ ಪರಿಶ್ರಮಕ್ಕೆ ಒಳಿತಾಗಲಿ ಎಂದು ಅವರು ಆಶಿಸಿದರು. ಅಕ್ಷಮಾಲ ಫುಡ್ ಅಂಡ್ ಬಿವರೇಜಸ್ ಮಳಿಗೆಗೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡಿ ಫಟ್ಟದ ರೊಟ್ಟಿ ರುಚಿ ಸವಿದು ಮೆಚ್ಚುಗೆ ವ್ಯಕ್ತಪಡಿಸಿದರು.

#### ಪಾಕ ಸ್ಪರ್ಧೆಯಲ್ಲಿ ಸ್ತ್ರೀ ಶಕ್ತಿ ಪ್ರದರ್ಶನ

ಕೃಷಿ ಇಲಾಖೆಯಿಂದ ಆಯೋಜಿಸಿದ್ದ ಸಿರಿಧಾನ್ಯ ಮೇಳದ ಅಂಗವಾಗಿ ಮಹಿಳೆಯರಿಗಾಗಿ ಏರ್ಪಡಿಸಿದ್ದ ಪಾಕ ಸ್ಪರ್ಧೆಯಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಸಿರಿ ಧಾನ್ಯಗಳಾದ ರಾಗಿ, ನವಣೆ, ಸಜ್ಜೆ, ಗೊರಕ ಮತ್ತಿತರ ಪದಾರ್ಥಗಳಿಂದ ತಯಾರಿಸಲಾದ ವಿವಿಧ ಬಗೆಯ ಖಾದ್ಯಗಳು ಕೆಲವೇ ಗಂಟೆಗಳಲ್ಲಿ ಬಿಕರಿಯಾದವು. ಸಿಹಿ ಹಾಗೂ ಖಾದ್ಯ ಪದಾರ್ಥಗಳನ್ನು ತಯಾರಿಸಿಕೊಂಡು ಬಂದಿದ್ದ ಮಹಿಳೆಯರು ತಮ್ಮ ಪಾಕ ಕೌಶಲವನ್ನು ಸಾರ್ವಜನಿಕರಿಗೆ ಪ್ರಸ್ತುತಪಡಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡರು ಎಲ್ಲಾ ಮಳಿಗೆಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ನಗರ ಹಾಗೂ ವಿವಿಧ ತಾಲ್ಲೂಕುಗಳಿಂದ ಬಂದಿದ್ದ ಜನರು ಕೆಲವೇ ಸಮಯದಲ್ಲಿ ಪದಾರ್ಥಗಳನ್ನು ಖರೀದಿಸಿದರು.

ಸಂಸದ ಶ್ರೇಯಸ್ ಪಟೇಲ್ ಅವರು ಯಂತ್ರೋಪಕರಣ ಮಳಿಗೆಗಳ ಉದ್ಘಾಟಿಸಿದರು. ಶಾಸಕ ಹೆಚ್.ಪಿ.ಸ್ವರೂಪ್ ಅಧ್ಯಕ್ಷತೆ ವಹಿಸಿದ್ದರು. ಇದೇ ವೇಳೆ ಜಿಲ್ಲೆಯ 16 ಪ್ರಗತಿಪರ ರೈತರನ್ನು ಸನ್ಮಾನಿಸಲಾಯಿತು. ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್ .ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತಾ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಪಿ.ರಮೇಶ್‌ಕುಮಾರ್, ತೋಟಗಾರಿಕೆ ಉಲಾಖೆ ಜಂಟಿ ನಿರ್ದೇಶಕ ಯೋಗೇಶ್, ರೈತ ಮುಖಂಡ ಕಣಗಾಲ್ ಮೂರ್ತಿ, ಆಕಾಶವಾಣಿ ಕಾರ್ಯಕ್ರಮ ನಿರ್ವಹಣಾಧಿಕಾರಿ ಮಧುಸೂದನ್ ಮತ್ತಿತರರಿದ್ದರು.

#### ಸಿರಿಧಾನ್ಯ ಮಹತ್ವ ತಿಳಿಸಲು ಸಲಹೆ

ನೇಪಥ್ಯಕ್ಕೆ ಸರಿಯುತ್ತಿರುವ ಆಲೂಗೆಡ್ಡೆ ಬೆಳೆಗೆ ಮರುಜೀವ, ಸಿರಿ ಧಾನ್ಯ ಬೆಳೆಗಳ ಮಹತ್ವವನ್ನು ತಿಳಿಸುವ ಉದ್ದೇಶದಿಂದ ತೋಟಗಾರಿಕೆ ಹಾಗೂ ಕೃಷಿ ಇಲಾಖೆಯಿಂದ ಆಲೂಗೆಡ್ಡೆ ಮತ್ತು ಸಿರಿ ಧಾನ್ಯ ಮೇಳ ಆಯೋಜಿಸಿದ್ದು ರೈತರು ಸದುಪಯೋಗ ಪಡೆಯಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಕೋರಿದರು.

ಎರಡು ದಿನಗಳ ಆಲೂಗೆಡ್ಡೆ ಮೇಳ ಹಾಗೂ ಸಿರಿ ಧಾನ್ಯ ಮೇಳ ಉದ್ಘಾಟಿಸಿ ಮಾತನಾಡಿದರು. ಸಿರಿ ಧಾನ್ಯ ಕನಿಷ್ಠ ಫಲವತ್ತಾದ ಭೂಮಿಯಲ್ಲಿ ಬೆಳೆಯುವ ಬೆಳೆಯಾಗಿದೆ. ಅಲ್ಪ ಸ್ವಲ್ಪ ಮಳೆಯಾದರೂ ಉತ್ತಮ ಇಳುವರಿ ಪಡೆಯಬಹುದು. ನಿರ್ವಹಣಾ ವೆಚ್ಚವೂ ಕಡಿಮೆಯಾದ್ದರಿಂದ ಹಿಂದಿನ ಕಾಲದಲ್ಲಿ ಹೆಚ್ಚಾಗಿ ಬೆಳೆಯುತ್ತಿದ್ದರು. ಆರೋಗ್ಯಕ್ಕೂ ಸಿರಿ ಧಾನ್ಯಗಳ ಉಪಯೋಗ ಹೆಚ್ಚಿದೆ. ಆದ್ದರಿಂದ ರೈತರು ಆಧುನಿಕ ಯಂತ್ರೋಪಕರಣ ಸಹಾಯದಿಂದ ಸಿರಿ ಧಾನ್ಯ ಬೆಳೆಗೆ ಆಸಕ್ತಿ ತೋರಬೇಕೆಂದು ಸಲಹೆ ನೀಡಿದರು.

## ಜಗತ್ತಿನ ಬಲಿಷ್ಠ ಪ್ರಜಾಪ್ರಭುತ್ವ ದೇಶ ಭಾರತ: ಸಿಮೆಂಟ್ ಮಂಜು

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಸಕಲೇಶಪುರ: ಭಾರತವು ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರವಾಗಿ ರೂಪುಗೊಳ್ಳಲು ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿರುವ ಸಂವಿಧಾನ ಕಾರಣ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಸುಭಾಷ್ ಮೈದಾನದಲ್ಲಿ ಸೋಮವಾರ ಏರ್ಪಡಿಸಿದ್ದ 77ನೇ ಗಣರಾಜ್ಯೋತ್ಸವದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ಹಾಗೂ ಗಣರಾಜ್ಯೋತ್ಸವವು ಮಹನೀಯರ ತ್ಯಾಗ ಮತ್ತು ಬಲಿದಾನದ ಫಲ. ಇತಿಹಾಸವನ್ನು ಅರಿತಾಗ ಮಾತ್ರ ಭವಿಷ್ಯವನ್ನು ಸಮರ್ಥವಾಗಿ ನಿರ್ಮಿಸಲು ಸಾಧ್ಯವೆಂದು ತಿಳಿಸಿದರು.

ಭಾರತ ಇಂದು ಜಗತ್ತಿನ ಮೂರನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರ ಹೊಮ್ಮುತ್ತಿದೆ. ವಿಜ್ಞಾನ, ತಂತ್ರಜ್ಞಾನ ಸೇರಿ ವಿವಿಧ ಕ್ಷೇತ್ರಗಳಲ್ಲಿ ದೇಶ ಮಹತ್ತರ ಸಾಧನೆ ಮಾಡಿದೆ. ದೇಶ ಸ್ವಾವಲಂಬಿಯಾದರೆ ವಿದೇಶಿಗರು ಭಾರತಕ್ಕೆ ಒತ್ತಡ ಹೇರುವ ಸಾಧ್ಯತೆ ಇರುವುದಿಲ್ಲ. ಯುವಜನತೆ ರಾಷ್ಟ್ರೀಯತೆಯನ್ನು ಮೈಗೂಡಿಸಿಕೊಂಡು ಸ್ವದೇಶಿ ವಸ್ತುಗಳನ್ನು ಬಳಸುವ ಮೂಲಕ ದೇಶದ ಆರ್ಥಿಕ ಶಕ್ತಿಯನ್ನು ಮತ್ತಷ್ಟು ಬಲಪಡಿಸಬೇಕೆಂದು ಅವರು ಕರೆ ನೀಡಿದರು.

#### ಸಕಲೇಶಪುರ ಸುಂದರ ಸ್ಥಳ

ಸಕಲೇಶಪುರ ಪ್ರದೇಶವು ಅಪಾರ ಪ್ರಕೃತಿ ಸೌಂದರ್ಯವನ್ನು ಹೊಂದಿದ್ದು, ಪ್ರವಾಸೋದ್ಯಮ ಅಭಿವೃದ್ಧಿಗೆ ಅಪಾರ ಅವಕಾಶಗಳಿವೆ. ಪ್ರವಾಸೋದ್ಯಮ ಅಭಿವೃದ್ಧಿಯಿಂದ ಸಾವಿರಾರು ಯುವಕರಿಗೆ ಉದ್ಯೋಗ ಸೃಷ್ಟಿಯಾಗುವುದರ ಜೊತೆಗೆ ಸ್ಥಳೀಯ ಆರ್ಥಿಕ ಚಟುವಟಿಕೆಗಳು ಹೆಚ್ಚಾಗಲಿವೆ. ಈ ನಿಟ್ಟಿನಲ್ಲಿ ಸರ್ಕಾರ ಈ ಭಾಗದ ಪ್ರವಾಸೋದ್ಯಮ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡಬೇಕೆಂದು ಅವರು ಮನವಿ ಮಾಡಿದರು.



#### ವಿಭಿನ್ನತೆಯಲ್ಲಿ ಏಕತೆ ಹೊಂದಿರುವ ದೇಶ

ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಉಪವಿಭಾಗಾಧಿಕಾರಿ ಡಾ. ಮಂಜುನಾಥ್, ವಿಭಿನ್ನತೆಯಲ್ಲಿ ಏಕತೆಯನ್ನು ಹೊಂದಿರುವ ಭಾರತವು ಜಗತ್ತಿಗೆ ಮಾದರಿಯಾದ ರಾಷ್ಟ್ರವಾಗಿದೆ ಎಂದು ಹೇಳಿದರು.

1950ರ ಜನವರಿ 26ರಂದು ಸಂವಿಧಾನ ಜಾರಿಗೆ ಬಂದ ದಿನವನ್ನು ಗಣರಾಜ್ಯೋತ್ಸ ವವಾಗಿ ಆಚರಿಸುತ್ತಿರುವುದು ಸಂವಿಧಾನದ ಮಹತ್ವವನ್ನು ಸಾರುವ ಸಂಭ್ರಮಾಚರಣೆಯಾಗಿದೆ ಎಂದು ತಿಳಿಸಿದರು.

ಭಾರತದ ಸಂವಿಧಾನವು ಜಗತ್ತಿನ ಅತಿದೊಡ್ಡ ಸಂವಿಧಾನವಾಗಿದ್ದು, ಮಾನವನ ಹುಟ್ಟಿನಿಂದ ಸಾವಿನವರೆಗಿನ ಅಗತ್ಯಗಳಿಗೆ ಸಂಬಂಧಿಸಿದ ಹಕ್ಕುಗಳು ಹಾಗೂ ಕರ್ತವ್ಯಗಳನ್ನು ಒಳಗೊಂಡಿದೆ. ಈ ಸಂವಿಧಾನದ ರಕ್ಷಣೆ ಮತ್ತು ಮೌಲ್ಯಗಳ ಪಾಲನೆ ವಿಶೇಷವಾಗಿ ಯುವಪೀಳಿಗೆಯ ಕರ್ತವ್ಯವಾಗಿದೆ. ಸಮಾನತೆ, ಶಿಸ್ತು, ಸಂಯಮ ಹಾಗೂ ಭ್ರಾತೃತ್ವದ ಮನೋಭಾವನೆಯೊಂದಿಗೆ ದೇಶವನ್ನು ಮುನ್ನಡೆಸಬೇಕೆಂದು ಅವರು ಕರೆ ನೀಡಿದರು.

ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಹಾಗೂ ಪೊಲೀಸರಿಂದ ಆಕರ್ಷಕ ಪಥಸಂಚಲನ ನಡೆಯಿತು. ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ತಾಲೂಕಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

## ಸ್ಕಾಲರ್ಸ್ ಇಂಟರ್ ನ್ಯಾಷನಲ್ ಶಾಲೆಯಲ್ಲಿ ಸರಸ್ವತಿ ಪೂಜೆ



ಹಾಸನ: ನಮ್ಮಲ್ಲಿ ನಮಗೆ ನಂಬಿಕೆ ಇಲ್ಲದಿದ್ದರೆ ಕೋಟಿ ದೇವರಲ್ಲಿ ನಂಬಿಕೆ ಇಟ್ಟರೂ ಫಲವಿಲ್ಲವೆಂದು ಸ್ಕಾಲರ್ಸ್ ಇಂಟರ್ ನ್ಯಾಷನಲ್ ಶಾಲೆ ಆಡಳಿತಾಧಿಕಾರಿ ಡಾ.ಹೆಚ್.ಎನ್.ಚಂದ್ರಶೇಖರ್ ಹೇಳಿದರು.

ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸರಸ್ವತಿ ಪೂಜೆಯಲ್ಲಿ ಮಾತನಾಡಿದ ಅವರು, ನಮ್ಮ ಪರಿಶ್ರಮ, ಛಲ ಹಾಗೂ ಪ್ರಾಮಾಣಿಕತೆಯ ಮೇಲೆ ಯಾವಾಗ ನಂಬಿಕೆ ಬರುತ್ತದೆಯೋ ಆಗ ಯಶಸ್ಸು ನಿಶ್ಚಿತ. ಫೆ. 17 ರಿಂದ ಐಸಿಎಸ್‌ಇ ಪರೀಕ್ಷೆ ಆರಂಭಗೊಳ್ಳಲಿದ್ದು ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಿರಲಿ ಎಂದು ಶುಭ ಹಾರೈಸಿದರು.

ವಿದ್ಯಾ ದೇವತೆಯಾದ ಸರಸ್ವತಿ ದೇವಿಗೆ ಪೂಜೆ ಸಲ್ಲಿಸಿದ್ದು, ಜ್ಞಾನ ಮತ್ತು ಬುದ್ಧಿ ಜೊತೆಗೆ ವಿದ್ಯೆ, ಐಶ್ವರ್ಯ ಮತ್ತು ಶುಭಗಳನ್ನು ಕರುಣಿಸಲಿ ಎಂದು ಪ್ರಾರ್ಥಿಸಿದರು. ಶಾಲೆಯ ಸಂಸ್ಥಾಪಕ ಲಕ್ಷ್ಮೀನಾರಜಿ, ಕಾರ್ಯದರ್ಶಿ ಮಮತಾ ಚಂದ್ರಶೇಖರ್, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಇದ್ದರು.

## ಆಲೂಗೆಡ್ಡೆ ಬಿತ್ತನೆಗೆ ಅಂಗಾಂಶ ಕೃಷಿ ಕುಡಿ ಕಾಂಡ ಸಹಕಾರಿ

### ಕೃಷಿ ವಿಜ್ಞಾನಿ ಅಮರನಂಜುಂಡೇಶ್ವರ | ರಾಜ್ಯ ಮಟ್ಟದ ಆಲೂಗೆಡ್ಡೆ ಮೇಳ

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಅಂಗಾಂಶ ಕೃಷಿ ಕುಡಿ ಕಾಂಡದ ಬೀಜೋತ್ಪಾದನೆಯಿಂದ ಆಲೂಗೆಡ್ಡೆ ಬಿತ್ತನೆ ಕೈಗೊಂಡರೆ ರೈತರು ಲಾಭ ಗಳಿಸಬಹುದಾಗಿದ್ದು ಆ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕಿದೆ ಎಂದು ಬೆಂಗಳೂರು ತೋಟಗಾರಿಕೆ ಮಹಾವಿದ್ಯಾಲಯ ಪ್ರಾಧ್ಯಾಪಕ ಡಾ. ಹೆಚ್.ಅಮರನಂಜುಂಡೇಶ್ವರ ಅವರು ಪ್ರತಿಪಾದಿಸಿದರು.

ತೋಟಗಾರಿಕೆ ಇಲಾಖೆ, ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಹಾಸನ ಆಕಾಶವಾಣಿ, ಆಲೂಗೆಡ್ಡೆ ವರ್ತಕರ ಸಂಘ ಹಾಗೂ



ವಿವಿಧ ರೈತ ಸಂಘಟನೆಗಳು ಮತ್ತು ಕೃಷಿ ಇಲಾಖೆಯಿಂದ ಹೊಸ ಬಸ್ ನಿಲ್ದಾಣ ಸಮೀಪದ ಹಾಸನಾಂಬ ಉದ್ಯಾನವನದಲ್ಲಿ ಸೋಮವಾರ ಏರ್ಪಡಿಸಿದ್ದ ರಾಜ್ಯ ಮಟ್ಟದ ಆಲೂಗೆಡ್ಡೆ ಮೇಳ ಹಾಗೂ ಸಿರಿ ಧಾನ್ಯ ಮೇಳದಲ್ಲಿ ಆಲೂಗೆಡ್ಡೆ ಬೆಳೆ ಉತ್ಪಾದನಾ ತಾಂತ್ರಿಕತೆ ವಿಚಾರವಾಗಿ ಉಪನ್ಯಾಸ ನೀಡಿದರು.

ಜಲಂಧರ್‌ನಿಂದ ಈಗ ತರಿಸಿಕೊಳ್ಳುತ್ತಿರುವ ಬಿತ್ತನೆ ಆಲೂಗೆಡ್ಡೆ ಎಂಟನೇ ಸಂತತಿಯಾಗಿರುವುದರಿಂದ ಅದು ನಮ್ಮ ಭೂಮಿಗೆ ಹೊಂದಿಕೊಳ್ಳುತ್ತಿಲ್ಲ. ನಾಲ್ಕನೇ ಸಂತತಿಗೆ ಸಿಗುವ ಆಲೂಗಡ್ಡೆಯಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಿರುವುದಲ್ಲದೆ ಗುಣಮಟ್ಟವೂ ಚೆನ್ನಾಗಿರುತ್ತದೆ. ಆದರೆ ನಮಗೆ 8ನೇ ಸಂತತಿ ನೀಡುತ್ತಿದ್ದಾರೆ. ಜಲಂಧರ್‌ನ ರೈತರು ನೀಡುವ ಆಲೂಗೆಡ್ಡೆಯಿಂದ ಇಲ್ಲಿನ ರೈತರಿಗೆ ಆಗುತ್ತಿರುವ ತೊಂದರೆಗಳ ಕುರಿತು ತಿಳಿಸಲು ಇಂದಿನ ಕಾರ್ಯಕ್ರಮಕ್ಕೆ ಅವರನ್ನೂ ಕರೆಸಲಾಗಿದೆ ಎಂದರು. ಜಿಲ್ಲೆಯ ರೈತರು ಅಂಗಾಂಶ ಕೃಷಿ ಕುಡಿ ಕಾಂಡದ ಮೂಲಕ ಬೀಜೋಪಚಾರಕ್ಕೆ ಮುಂದಾಗಬೇಕು. ಅದಕ್ಕಾಗಿ ತೋಟಗಾರಿಕೆ ಇಲಾಖೆ ಪ್ರತಿವರ್ಷ ಬೆಳೆ ಕ್ಷೇತ್ರೋತ್ಸವ ಮಾಡುತ್ತಿದ್ದು ಸದುಪಯೋಗ ಪಡೆಯಬೇಕು. ಲಾಭದಾಸೆಗೆ ನಮ್ಮ ರೈತರು ಜೋಳ, ಶುಂಠಿ ಬೆಳೆಯತ್ತ ವಾಲಿದ್ದಾರೆ. ಆ ಬೆಳೆಗಳು ಮಣ್ಣಿನ ಫಲವತ್ತತೆಯನ್ನು ಹೆಚ್ಚಿನ ಪ್ರಮಾಣದಲ್ಲಿ ಹೀರುವುದರಿಂದ ಆಲೂಗೆಡ್ಡೆ ಬೆಳೆ ನಿರೀಕ್ಷಿತ ಪ್ರಮಾಣದಲ್ಲಿ ಕೈ ಸೇರುತ್ತಿಲ್ಲ. ಈ ಬಗ್ಗೆ ರೈತರು ಚಿಂತನೆ ನಡೆಸಬೇಕು ಎಂದರು.

ಆಲೂಗೆಡ್ಡೆ ಬೆಳೆಯುಲ್ಲಿ ಜಿಲ್ಲೆಯ ರೈತರು ನಿರೀಕ್ಷಿತ ಇಳುವರಿ ಪಡೆಯಬೇಕೆಂದರೆ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳುವುದು ಹಾಗು ಬೀಜೋಪಚಾರಕ್ಕೆ ಆದ್ಯತೆ ನೀಡುವುದು ಮುಖ್ಯ. ರೈತರು ಯಾವುದೇ ಬೆಳೆಯನ್ನು ಕೈಗೊಳ್ಳುವುದು ಲಾಭಕ್ಕಾಗಿಯೇ ಹೊರತು ಹವ್ಯಾಸಕ್ಕಾಗಿ ಅಲ್ಲ. ಅತ್ಯಂತ ಲಾಭದಾಯಕ ಬೆಳೆಯಾಗಿದ್ದ ಆಲೂಗೆಡ್ಡೆ ಜಿಲ್ಲೆಯಲ್ಲಿ 50 ಸಾವಿರ ಹೆಕ್ಟೇರ್ ತಲುಪಿತ್ತು. ಇತ್ತೀಚೆಗೆ ಅದು 5 ಸಾವಿರ ಹೆಕ್ಟೇರ್‌ಗೆ ಇಳಿಕೆಯಾಗಿದೆ. ಬೆಳೆ ಕುರಿತು ರೈತರು ನಿರಾಸಕ್ತಿ ತೋರಿಸಲು ಕಾರಣವೇನೆಂಬುದರ ಕುರಿತು ಗಂಭೀರ ಚರ್ಚೆ ನಡೆಸಬೇಕಿದೆಎಂದರು.

ಕಳೆದ 30 ವರ್ಷಗಳಿಂದ ಜಿಲ್ಲೆಯ ಆಲೂಗೆಡ್ಡೆ ಬೆಳೆಗಾರರು ಪಂಜಾಬ್‌ನ ಜಲಂಧರ್ ಜಿಲ್ಲೆಯನ್ನೇ ಅವಲಂಬಿಸಿದ್ದಾರೆ ಎಂದರು.

# ಸಂವಿಧಾನದ ಆಶಯಕ್ಕೆ ಧಕ್ಕೆ ತರುವ ಪ್ರಯತ್ನ

## ಕೇಂದ್ರದ ವಿರುದ್ಧ ಸಚಿವ ಕೃಷ್ಣಬೈರೇಗೌಡ ಕಿಡಿ | 77ನೇ ಗಣರಾಜ್ಯೋತ್ಸವ

ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್

ಹಾಸನ: ಧರ್ಮ, ಜಾತಿ ಹೆಸರಿನಲ್ಲಿ ಗೊಂದಲ ಸೃಷ್ಟಿಸುವ ಪ್ರಯತ್ನಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿದ್ದು, ಕೂಡಿ ಬಾಳುವುದನ್ನು ಹೇಳಿಕೊಟ್ಟಿರುವ ಸಂವಿಧಾನದ ಆಶಯಗಳನ್ನೇ ಗಾಳಿಗೆ ತೂರಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಹೇಳಿದರು.

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ನಗರದ ಹಾಕಿ ಮೈದಾನದಲ್ಲಿ ಸೋಮವಾರ ಹಮ್ಮಿಕೊಂಡಿದ್ದ 77ನೇ ಗಣರಾಜ್ಯೋತ್ಸವದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ದೇಶ ಸ್ವಾತಂತ್ರ್ಯ ಗಳಿಸಿ ದಶಕಗಳೇ ಕಳೆದರೂ ಶ್ರೀಮಂತರು ಮತ್ತು ಬಡವರ ನಡುವಿನ ಅಂತರ ಹೆಚ್ಚುತ್ತಲೇ ಇದೆ. ದೇಶದ ಆರ್ಥಿಕ ಸಂಪತ್ತು ಕೆಲವರಿಗಷ್ಟೇ ಸಿಗುತ್ತಿದ್ದು ಈ ತಾರತಮ್ಯ ದೂರವಾದರಷ್ಟೇ ಸ್ವಾತಂತ್ರ್ಯಕ್ಕೆ ಬೆಲೆ ಎಂದರು.

ಸ್ವಾತಂತ್ರ್ಯ ನಂತರ ಭಾರತ



ಸಾಮಾಜಿಕವಾಗಿ ಪ್ರಗತಿ ಸಾಧಿಸಿದೆಯಾದರೂ ಆರ್ಥಿಕವಾಗಿ ಸಮಾನತೆ ಕಾಣಲು ಸಾಧ್ಯವಾಗಿಲ್ಲ. ಸ್ವಾತಂತ್ರ್ಯ ಬಂದಾಗ ದೇಶದಲ್ಲಿ ಗುಂಡು ಸೂಜಿ ಸಹ ತಯಾರಾಗುತ್ತಿರಲಿಲ್ಲ. ಆದರೀಗ ಕೈಗಾರಿಕೆ ಸೇರಿ ಎಲ್ಲಾ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸಿದ್ದೇವೆ. ಅನುದಾನ ನೀಡಿಕೆ, ತೆರಿಗೆ ಪಾಲು ಹಂಚಿಕೆ, ಹಿಂದಿ ಭಾಷೆ ಹೇರಿಕೆ ಮೂಲಕ ಕೇಂದ್ರ ಸರ್ಕಾರ ಸಂವಿಧಾನದ ಕತ್ತು ಹಿಸುಕುತ್ತಿದೆ. ಅನೇಕ

> ದೇಶದಲ್ಲಿ ಹಿಂದಿನಿಂದ ಭಾಷಾ ವೈವಿಧ್ಯತೆ ಕಾಪಾಡಿಕೊಂಡು ಬರಲಾಗಿದೆ. ವಿಪರ್ಯಾಸ ಎಂದರೆ ಸಂವಿಧಾನದ ಆಶಯಕ್ಕೆ ತದ್ವಿರುದ್ಧವಾಗಿ ಕೇಂದ್ರವು ಬಲವಂತವಾಗಿ ಹಿಂದಿ ಹೇರಲು ಹೊರಟಿದೆ. ದೇಶದ ಹಲವು ರಾಜ್ಯಗಳ ಆರ್ಥಿಕ ಸ್ಥಿತಿ ಕುಸಿಯುತ್ತಿದೆ. ಆದರೆ, ಕರ್ನಾಟಕ ಅಕ್ಷಯ ಪಾತ್ರೆಯಾಗಿದೆ. ಕೇಂದ್ರ ಸರ್ಕಾರ ನಮ್ಮನ್ನು ಕಡೆಗಣಿಸಬಾರದು.
>
> – ಕೃಷ್ಣಬೈರೇಗೌಡ, ಜಿಲ್ಲಾ ಉಸ್ತುವಾರಿ ಸಚಿವ

ಭಾಷೆ, ಸಂಸ್ಕೃತಿ, ಜಾತಿ, ಸಂಸ್ಕೃತಿ ಹೊಂದಿರುವ ದೇಶ ನಮ್ಮದು. ಆದರೂ ಒಂದಾಗಿ ನಡೆಯುತ್ತಿರುವ ದೇಶ ಭಾರತ ಹೊರತು ಪಡಿಸಿದರೆ ಬೇರೊಂದಿಲ್ಲ. ನಮ್ಮ ಶಕ್ತಿ, ಜೀವನ ಶೈಲಿ, ನಂಬಿಕೆ ಎಲ್ಲವೂ ವೈವಿಧ್ಯಮಯವೆಂದು ಬಣ್ಣಿಸಿದರು.

ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಅನುದಾನ ಸಿಗುತ್ತಿಲ್ಲ, ಹಣಕಾಸು ಆದಾಯದ ಪಾಲನ್ನು ಶೇ.23 ರಷ್ಟು ಕಡಿತ ಮಾಡಿ, ಕರ್ನಾಟಕವನ್ನು ಆರ್ಥಿಕ ಸಂಕಷ್ಟಕ್ಕೆ ದೂಡುವ ಯತ್ನ ಮುಂದುವರಿದಿದೆ. ತಲಾ ಆದಾಯದಲ್ಲಿ ಕರ್ನಾಟಕ ಮೊದಲ ಸ್ಥಾನದಲ್ಲಿದೆ. ದೇಶಕ್ಕೆ ಆದಾಯ ಕೊಡುವ ರಾಜ್ಯಗಳಲ್ಲಿ ಕರ್ನಾಟಕ ಮುಂದಿದೆ. ನಮ್ಮಿಂದ ತೆರಿಗೆ ಪಡೆದು, ವಾಪಾಸ್ ಕೊಡಲು ಹಗೆತನ ಮಾಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಶಾಸಕ ಹೆಚ್.ಪಿ.ಸ್ವರೂಪ್ ಅಧ್ಯಕ್ಷತೆ ವಹಿಸಿದ್ದರು. ಸಂಸದ ಶ್ರೇಯಸ್ ಪಟೇಲ್, ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ, ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತಾ, ಡಿಎಫ್‌ಓ ಸೌರಭ್‌ಕುಮಾರ್, ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಪಿ.ರಮೇಶ್‌ಕುಮಾರ್, ಡಿಡಿಪಿಐ ಕೆ.ಎನ್.ಬಲರಾವ್, ತಹಶೀಲ್ದಾರ್ ಗೀತಾ ಮತ್ತಿತರರಿದ್ದರು.

#### ವಿವಿಧ ಕ್ಷೇತ್ರ ಸಾಧಕರಿಗೆ ಸನ್ಮಾನ

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಜಿಲ್ಲಾ ಕ್ರೀಡಾಂಗಣದ ಹಾಕಿ ಮೈದಾನದಲ್ಲಿ ಏರ್ಪಡಿಸಿದ್ದ 77ನೇ ಗಣರಾಜ್ಯೋತ್ಸವದಲ್ಲಿ ಕೆಎಸ್ ಆರ್‌ಪಿ, ಡಿಎಆರ್, ನಾಗರೀಕ ಪೊಲೀಸ್ ತಂಡ, ಮಹಿಳಾ ಪೊಲೀಸ್ ತಂಡ, ಗೃಹ ರಕ್ಷಕ ದಳ, ಅರಣ್ಯ ಇಲಾಖೆ ತಂಡ, ಅಬಕಾರಿ ಇಲಾಖೆ ತಂಡ, ಎನ್ ಸಿಸಿ, ಸೇವಾದಳ ಹಾಗು ಶಾಲಾ ಮಕ್ಕಳು ಆಕರ್ಷಕ ಪಥಸಂಚಲನ ನಡೆಸಿದರು.

ವಿವಿಧ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ವೈಭವಯುತವಾಗಿ ಮೂಡಿಬಂತು. ಇದೇ ವೇಳೆ ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನಿಸಲಾಯಿತು.

#### ಕರ್ನಾಟಕ ಚಿನ್ನದ ಮೊಟ್ಟೆ ಇಡುವ ಕೋಳಿ

ರಾಜ್ಯಕ್ಕೆ ಅನ್ಯಾಯ ಮಾಡುವುದು ಒಳ್ಳೆಯದಲ್ಲ. ರಾಜ್ಯ ಪ್ರಗತಿಯಾದರೆ, ದೇಶ ಪ್ರಗತಿ ಆಗಲಿದೆ. ರಾಜ್ಯಗಳನ್ನು ಕಪಿಮುಷ್ಟಿಯಲ್ಲಿಟ್ಟುಕೊಂಡು ಅಭಿವೃದ್ಧಿ ಮಾಡಲಾಗುವುದಿಲ್ಲ. ಕನ್ನಡಿಗರ ಆದಾಯ ಹೆಚ್ಚಾದರೆ ಕೇಂದ್ರಕ್ಕೂ ಆದಾಯ ಹೆಚ್ಚುತ್ತದೆ. ಮನರೇಗಾ ಯೋಜನೆಯಲ್ಲೂ ಅನ್ಯಾಯ ಮಾಡಿ ಬಡವರ ಆದಾಯ ಕಸಿಯಲಾಗುತ್ತಿದೆ. ಬಡವರು, ಕೂಲಿ ಕಾರ್ಮಿಕರಿಗೆ ಮರ್ಮಾಘಾತ ನೀಡಲಾಗಿದೆ. ಕೇಂದ್ರ ಸರ್ಕಾರಕ್ಕೆ ಚಿನ್ನದ ಮೊಟ್ಟೆ ಇಡುವ ಕೋಳಿ ಕರ್ನಾಟಕ. ಮನರೇಗಾ ಯೋಜನೆ ತಿದ್ದುಪಡಿಯನ್ನು ವಾಪಾಸ್ ಪಡೆಯಬೇಕೆಂದು ಸಚಿವರು ಆಗ್ರಹಿಸಿದರು.



# ಹಿಂದೂ ಧರ್ಮ ಉಳಿವಿಗಾಗಿ ಒಗ್ಗಟ್ಟಿನ ಅವಶ್ಯ ಹೆಚ್ಚಿದೆ

## ನಿಶ್ಚಲಾನಂದನಾಥ ಸ್ವಾಮೀಜಿ ಅಭಿಮತ | ಶ್ರವಣಬೆಳಗೊಳದಲ್ಲಿ ಹಿಂದೂ ಸಮಾಜೋತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಪ್ರಾಚೀನ ಇತಿಹಾಸ ಹೊಂದಿರುವ ಸನಾತನ ಧರ್ಮ ನಾಶವಾಗುವ ಮೊದಲು ಯುವ ಸಮಾಜ ಎಚ್ಚೆತ್ತು ಧರ್ಮದ ಉಳಿವಿಗಾಗಿ ಒಗ್ಗೂಡಬೇಕಿದೆ ಎಂದು ಕೆಂಗೇರಿಯ ವಿಶ್ವ ಒಕ್ಕಲಿಗ ಮಹಾಸಂಸ್ಥಾನ ಮಠದ ಶ್ರೀ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಹೇಳಿದದರು.

ತಾಲ್ಲೂಕಿನ ಶ್ರವಣಬೆಳಗೊಳದ ಬಾಹುಬಲಿ ಪಾಲಿಟೆಕ್ನಿಕ್ ಆವರಣದಲ್ಲಿ ತಾಲ್ಲೂಕು ಹಿಂದು ಸಮಾಜೋತ್ಸವ ಸಮಿತಿಯಿಂದ ಏರ್ಪಡಿಸಿದ್ದ ಹಿಂದು ಸಮಾಜೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿ, ಮೈ ಮರೆತರೆ ಮುಂದೊಂದು ದಿನ ಪಶ್ಚಾತಾಪ ಪಡಬೇಕಾಗುತ್ತದೆ ಎಂದರು.

ಹಿಂದು ಧರ್ಮ ನಿನ್ನೆ-ಮೊನ್ನೆ ಹುಟ್ಟಿದ್ದಲ್ಲ. ಅದಕ್ಕೆ ಅನಾದಿ ಕಾಲದ ಇತಿಹಾಸವಿದೆ. ಸಂಸ್ಕೃತಿಯೇ ಸನಾತನ ಧರ್ಮವಾಗಿ ಬೆಳೆದು ಬಂದಿದೆ. ಇಡೀ ವಿಶವೇ ಹಿಂದೂ ದರ್ಮ ಹಾಗು ಸಂಸ್ಕೃತಿಯನ್ನು ಮೆಚ್ಚುತ್ತಿದೆ. ಆದರೆ, ಕೆಲವರು ಧರ್ಮದ ಬಗ್ಗೆ ಹಗುರವಾಗಿ ಮಾತನಾಡುವುದು ಹಾಗೂ ಕುಟುಕುವುದು ಏಕೆ ಎಂಬುದೇ ಯಕ್ಷ ಪ್ರಶ್ನೆಯಾಗಿದೆಯೆಂದರು.

ಕತ್ತರಿಘಟ್ಟದ ಶ್ರೀ ಮೆಳಿಯಮ್ಮ ಆಧ್ಯಾತ್ಮಿಕ ಕೇಂದ್ರದ ಶ್ರೀ ಚಂದ್ರಶೇಖರ ಗುರೂಜಿ ಮಾತನಾಡಿ, ಉತ್ಸವ ಎಂದರೆ ಒಂದು ಸಮಾಜ ಅಥವಾ ಧರ್ಮ ಒಗ್ಗೂಡುವ ವೇದಿಕೆ. ಆಚಾರ-ವಿಚಾರಗಳ ಸಂಗತಿಗೆ ಬಂದಾಗ ಭಾರತ ಮೊದಲ ಸಾಲಿನಲ್ಲಿ ನಿಲ್ಲುತ್ತದೆ. ನಮ್ಮ ಸಂಸ್ಕೃತಿ, ಸಂಸ್ಕಾರ ಹಾಗು ಸಂಪ್ರದಾಯವನ್ನು ವಿದೇಶಗರು ಇಷ್ಟಪಡುತ್ತಾರೆ ಎಂದರು

ಸಮಾಜೋತ್ಸವ ಸಮಿತಿ ಉಪಾಧ್ಯಕ್ಷ ಹೆಚ್.ಎನ್.ಲೋಕೇಶ್ ಮಾತನಾಡಿ, ರಾಜ್ಯ, ದೇಶ ಹಾಗು ಧರ್ಮಕ್ಕೆ ಅಪಾಯ ಉಂಟುಮಾಡುವ ಸನ್ನಿವೇಶಗಳು ನಡೆಯುತ್ತಿವೆ. ಹಿಂದೂ ಸಮಾಜವು ಜಾತಿ-ಭೇದ ಬದಿಗೊತ್ತಿ ಒಗ್ಗೂಡದಿದ್ದರೆ ಅಪಾಯ ಕಟ್ಟಿಟ್ಟ ಬುತ್ತಿ ಎಂದರು.

ಚನ್ನರಾಯಪಟ್ಟಣ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ರಾಜಯೋಗಿನಿ ಬಿ.ಕೆ. ಮೋಹನ ಕುಮಾರಿ ಮಾತನಾಡಿ, ಧರ್ಮ ಎಲ್ಲಿ ನೆಲೆಸಿರುತ್ತದೆಯೋ ಅಲ್ಲಿ ಶಾಂತಿ ಹಾಗು ನೆಮ್ಮದಿ ಸದಾ ಉಸಿರಾಡುತ್ತಿರುತ್ತದೆ. ಧರ್ಮವನ್ನು ನಾವು ಕಾಪಾಡಿದರೆ ಅದು ನಮ್ಮನ್ನು ಕಾಪಾಡುತ್ತದೆ.

ರಾಜ್ಯಸಭಾ ಸದಸ್ಯ, ನಟ ಜಗ್ಗೇಶ್ ಅವರು ಮಾತನಾಡಿ, ಪ್ರತಿಯೊಬ್ಬರಲ್ಲಿಯೂ ಆಧ್ಯಾತ್ಮಿಕ ಚಿಂತನೆ ಚಿಲುಮೆಯಾಗಿ ಉಕ್ಕಬೇಕು. ನಾವು ಪ್ರತಿದಿನ ಬದುಕುವ ಪ್ರತಿ ಕ್ಷಣದ ಸಂಸ್ಕೃತಿಯೇ ಹಿಂದೂ ಧರ್ಮ ಎಂದರು.

ಹಿಂದೂ ಧರ್ಮದ ಮೇಲೆ ತಲೆ ತಲಾಂತರಗಳಿಂದ ದಬ್ಬಾಳಿಕೆಯಾಗುತ್ತಲೇ ಇದೆ. ಅನ್ಯ ಧರ್ಮಿಯರು ನಮ್ಮ ದೇಶವನ್ನು ಆಳಿದ್ದಾರೆ.

ನಮ್ಮ ಹಿರಿಯರ ಮೇಲೆ ಅಟ್ಟಹಾಸ ಮೆರೆದಿದ್ದಾರೆ. ಆದರೆ, ಹಿಂದೂ ಧರ್ಮ ಎಲ್ಲಾ ಸವಾಲುಗಳನ್ನು ಮೆಟ್ಟಿ ಪ್ರಬಲವಾಗಿ ಬೆಳೆದಿದೆ. ಅದಕ್ಕೆ ಹಿಂದೂಪರ ಹೋರಾಟಗಾರರ ತ್ಯಾಗ ಬಲಿದಾನ ಕಾರಣವೆಂದರು.

ಧರ್ಮದ ವಿಚಾರ ಬಂದಾಗ ಅನ್ಯರಿಗಿಂತ ನಮ್ಮವರೇ ಅಪಪ್ರಚಾರ ಮಾಡುವುದರಲ್ಲಿ ಮುಂದೆ ನಿಲ್ಲುತ್ತಾರೆ. ಬಹುತೇಕ ದೇಶಗಳಲ್ಲಿ ಅಲ್ಲಿಯ ಜನರು ದೇಶ ಹಾಗು ಭಾಷೆಯನ್ನು ಗೌರವಿಸುತ್ತಾರೆ. ನಮ್ಮಲ್ಲಿ ಕೆಲವು ಕಿಡಿಗೇಡಿಗಳು ನಮ್ಮ ನಮ್ಮಲ್ಲಿ ಬೆಂಕಿ ಹಚ್ಚಿ ಅವರ ಕೈಗಳನ್ನು ಬಿಸಿ ಮಾಡಿಕೊಳ್ಳುತ್ತಾರೆ. ನಾವು ಎಚ್ಚೆತ್ತುಕೊಳ್ಳದಿದ್ದರೆ ಏಕತೆಗೆ ಧಕ್ಕೆ ತರುತ್ತಾರೆ. ಸಮಾಜವನ್ನು ಒಗ್ಗೂಡಿಸುವ ಉದ್ದೇಶದಿಂದ ರಾಜ್ಯಾದ್ಯಂತ ಹಿಂದೂ ಸಮಾಜೋತ್ಸವ ಆಯೋಜಿಸಲಾಗಿದೆಯೆಂದರು.

ಶ್ರವಣಬೆಳಗೊಳ ಹಿಂದೂ ಸಮಾಜೋತ್ಸವ ಸಮಿತಿ ಸದಸ್ಯ ಮನುಗೌಡ ಮಾತನಾಡಿದರು. ತಾಲ್ಲೂಕು ಹಿಂದೂ ಸಮಾಜೋತ್ಸವ ಸಮಿತಿ ಸದಸ್ಯರಾದ ಹೆಚ್.ಸಿ.ಕೃಷ್ಣಮೂರ್ತಿ, ಪರಮ ಗಂಗಾಧರ್, ಗಿರೀಶ್ ನಂಬಿಹಳ್ಳಿ, ನಟರಾಜ್ ಪೂಮಡಿಹಳ್ಳಿ, ಸತೀಶ್ ಹೊಸಹಳ್ಳಿ, ನಾಗೇಶ್ ಹಿರಿಬಿಳ್ತಿ, ಶ್ರವಣ್, ಪುನೀತ್ ಹೊಸಹಳ್ಳಿ, ದೀಕ್ಷಿತ್, ಪ್ರದೀಪ್, ನಾಗರಾಜ್ ಗೌಡ, ನಿತಿನ್ ಸಾಣೇನಹಳ್ಳಿ, ಎಸ್.ಜೆ.ಭಾಸ್ಕರಾಚಾರ್ ಮುಂತಾದವರಿದ್ದರು.

# ಪತಂಜಲಿ ಯೋಗ ಪರಿವಾರದಿಂದ ಸಾಮೂಹಿಕ ಸೂರ್ಯ ನಮಸ್ಕಾರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಥ ಸಪ್ತಮಿ ಅಂಗವಾಗಿ ನಗರದ ಗಂಧದ ಕೋಠಿ ಉದ್ಯಾನವನದಲ್ಲಿ ಭಾನುವಾರ ಪತಂಜಲಿ ಯೋಗ ಪರಿವಾರದಿಂದ ಅಗ್ನಿಹೋತ್ರ ಸಹಿತ ಸಾಮೂಹಿಕ ಸೂರ್ಯ ನಮಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಯೋಗ ಸಾಧಕ ಶೇಷಪ್ಪ ಅವರು 108 ಸಾಮೂಹಿಕ ಸೂರ್ಯ ನಮಸ್ಕಾರ ಮಾಡುವ ಮೂಲಕ ಯಜ್ಞಕ್ಕೆ ಚಾಲನೆ ನೀಡಿದರು. ರಾಜ್ಯ ಯಜ್ಞ ಪ್ರಭಾರಿ ಹರಿಹರಪುರ ಶ್ರೀಧರ್ ಅವರ ಮಾರ್ಗದರ್ಶನದಲ್ಲಿ ವೇದ ಭಾರತೀ ಮಹಿಳಾ ತಂಡ ಅಗ್ನಿ ಹೋತ್ರವನ್ನು ವೇದ ಮಂತ್ರಗಳೊಂದಿಗೆ ನೆರವೇರಿಸಿದರು. ನಗರದ ವಿವಿಧ ಯೋಗ ಕೇಂದ್ರಗಳ ಶಿಕ್ಷಕರು ಹಾಗೂ ಯೋಗ ಪಟುಗಳು 108 ಸೂರ್ಯ ನಮಸ್ಕಾರ ಮಾಡಿದರು.

ಹರಿಹರಪುರ ಶ್ರೀಧರ್ ಮಾತನಾಡಿ, ಸೂರ್ಯ ದೇವ ಜೀವ ಶಕ್ತಿ, ಆರೋಗ್ಯ ಹಾಗು ಚೈತನ್ಯದ ಮೂಲವಾಗಿದೆ. ನಿತ್ಯ ಯೋಗಾಭ್ಯಾಸ ಮತ್ತು ಸೂರ್ಯೋಪಾಸನೆಯಿಂದ ದೈಹಿಕ-ಮಾನಸಿಕ ಆರೋಗ್ಯ ಸಾಧಿಸಬಹುದು ಎಂದರು.

ರಾಜ್ಯ ಸಮಿತಿ ಸದಸ್ಯ ಪರಮೇಶ್ವರ ಮಾತನಾಡಿ, ರಥ ಸಪ್ತಮಿಯ ವೈಜ್ಞಾನಿಕ ಹಾಗು ಧಾರ್ಮಿಕ ಮಹತ್ವವನ್ನು ವಿವರಿಸಿದರು. ಪತಂಜಲಿ ಯೋಗ ಪರಿವಾರ ಜಿಲ್ಲಾ ಸಂರಕ್ಷಕ ಎಸ್.ಡಿ.ಲೋಕನಾಥ್, ರಾಜ್ಯ ಯುವ ಪ್ರಭಾರಿ ಸುರೇಶ್ ಪ್ರಜಾಪತಿ, ಮಹಿಳಾ ಪ್ರಭಾರಿ ಶಾರದಾ ಧರ್ಮಾನಂದ, ಕವಿತಾ ಮಾಲತೇಶ್, ಸಚಿನ್, ಕೇಶವಮೂರ್ತಿ, ವಿಜಯಕುಮಾರ್ ಮತ್ತಿತರರಿದ್ದರು.

# ಜ. 28ಕ್ಕೆ ಅರೇಮಾದನಹಳ್ಳಿ ವಿಶ್ವಕರ್ಮ ಪೀಠದಲ್ಲಿ ಸಾಮೂಹಿಕ ಉಪನಯನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಅರಕಲಗೂಡು ತಾಲೂಕು ಅರೇಮಾದನಹಳ್ಳಿ ವಿಶ್ವಕರ್ಮ ಜಗದ್ಗುರು ಪೀಠದಲ್ಲಿ ಜ. 28 ರಂದು ಪರಮಪೂಜ್ಯ ಅನಂತಶ್ರೀ ವಿಭೂಷಿತ ಶ್ರೀಮತ್ ಆದಿ ಜಗದ್ಗುರು ಸುಜ್ಞಾನಪ್ರಭುಮಹಾಸ್ವಾಮಿ ಭಗವದ್ಪಾದಂಗಳವರ ಜಯಂತಿ ಮತ್ತು ಸಾಮೂಹಿಕ ಉಪನಯನ ಸಮಾರಂಭ ಜರುಗಲಿದೆ.

ಬೆಳಗ್ಗೆ 11ಕ್ಕೆ ನಡೆಯುವ ಧಾರ್ಮಿಕ ಮಹಾಸಭೆಯ ದಿವ್ಯ ಸಾನಿಧ್ಯವನ್ನು ಯತಿಗಳಾದ ಪರಮಪೂಜ್ಯ ಅನಂತಶ್ರೀ ವಿಭೂಷಿತ ಶಿವಸುಜ್ಞಾನತೀರ್ಥ ಮಹಾಸ್ವಾಮಿಗಳು ವಹಿಸಲಿದ್ದಾರೆ. ಚನ್ನಗಿರಿ ತಾಲೂಕು ಸಾವಿತ್ರಿಪೀಠ, ವಡ್ನಾಳು ಜಗದ್ಗುರುಗಳಾದ ಶ್ರೀ ಶಂಕರಾತ್ಮಾನಂದ ಸರಸ್ವತಿ ಸ್ವಾಮೀಜಿ, ಹುಬ್ಬಳ್ಳಿ ಜಗದ್ಗುರು ಶಂಕರಾಚಾರ್ಯಭಗವದ್ಪಾದ ಅದ್ವೈತ ಪೀಠಂ ಮಠಾಧೀಶ ಶ್ರೀ ಶಿವಾನಂದಭಾರತಿ ಸ್ವಾಮೀಜಿ, ತಮಿಳುನಾಡು ತಿರುನಲ್‌ವೇಲಿ ರಾಜರಾಜೇಶ್ವರಿ ಪೀಠ ಶ್ರೀಮದ್ ಸರಸಮಯ್ಯ, ಕೋವಾರೀನಾಥರ್ ಅಧೀನಂ ಮಠಾಧೀಶ ಸ್ವಾಮಿಬುದ್ಧಾತ್ಮಾನಂದ ಸರಸ್ವತಿ, ಕೆಸವತ್ತೂರು ವಿರಕ್ತ ಮಠಾಧೀಶ ಬಸವರಾಜೇಂದ್ರ ಸ್ವಾಮೀಜಿ, ಬೆಂಗಳೂರು ಶ್ರೀ ಶಂಕರಾನಂದಾಶ್ರಮ ಗೀತಮ್ಮ ಸಾನಿಧ್ಯ ವಹಿಸಲಿದ್ದಾರೆ.

ಸಂಸದ ಶ್ರೇಯಸ್ ಪಟೇಲ್ ನೇತೃತ್ವದಲ್ಲಿ, ಮಾಜಿ ಸಚಿವ ಹಾಗೂ ಶಾಸಕ ಹೆಚ್.ಡಿ. ರೇವಣ್ಣ ಅವರು ಶ್ರಿ ಗುರುಗಳ ಭಾವಚಿತ್ರ ಅನಾವರಣ ಮಾಡಲಿದ್ದಾರೆ. ಶಾಸಕ ಎ. ಮಂಜು ರವರು ಸಭೆ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಡಾ. ಎ.ಟಿ. ರಾಮಸ್ವಾಮಿ, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಪಿ. ಸುಜ್ಞಾನಮೂರ್ತಿ, ರಾಜ್ಯ ವಿಶ್ವಕರ್ಮ ಮಹಾಒಕ್ಕೂಟದ ಗೌರವಾಧ್ಯಕ್ಷ ಕೆ.ಎಸ್. ಪ್ರಭಾಕರ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಮಾಜಿ ಮಹಾಪೌರ ರಾಮಕೃಷ್ಣ ಬಡಿಗೇರ, ದಕ್ಷಿಣ ಕನ್ನಡ ಎಸ್‌ಕೆಎಫ್ ಸಮೂಹ ಉದ್ಯಮದ ರಾಮಕೃಷ್ಣ ಆಚಾರ್ಯ ರವರು ಭಾಗವಹಿಸಲಿದ್ದಾರೆ.

ಉಪನಯನಕ್ಕೆ ಬರುವ ವಟುಗಳು ಜ. 27 ರಂದು ಸಂಜೆ ಶ್ರೀಮಠಕ್ಕೆ ನಿತ್ಯೋಪಯೋಗಿ ವಸ್ತುಗಳನ್ನು ತರಬೇಕು ಎಂದು ಹಾಸನ ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ಹೆಚ್. ವಿ. ಹರೀಶ್ ರವರು ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 8105368256 / 9686310884 ಸಂಪರ್ಕಿಸಲು ಕೋರಲಾಗಿದೆ.

# ಮಕ್ಕಳಿಗೆ ಸಾಮಾಜಿಕ ಪ್ರಜ್ಞೆ ಕಲಿಸಿಕೊಡಿ: ಮಾಧುಸ್ವಾಮಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಸೀಕೆರೆ: ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆಯಾಗುತ್ತಿದ್ದರೂ ಮಕ್ಕಳಲ್ಲಿ ಸಾಮಾಜಿಕ ಪ್ರಜ್ಞೆ ಹಾಗೂ ಮಾನವೀಯ ಮೌಲ್ಯ ಬೆಳೆಸುವ ಕೆಲಸವಾಗುತ್ತಿಲ್ಲ. ಹೀಗಾಗಿ ಸಮಾಜಘಾತುಕ ಕೆಲಸಗಳು ಹೆಚ್ಚುತ್ತಿವೆ ಎಂದು ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ಹೇಳಿದರು.

ತಾಲ್ಲೂಕಿನ ದೊಡ್ಡ ಮೇಟಿಕುರ್ಕೆ ಗ್ರಾಮದ ಎಸ್‌ಎನ್‌ಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಏರ್ಪಡಿಸಿದ್ದ 2025-26ನೇ ಸಾಲಿನ ವಾರ್ಷಿಕೋತ್ಸವ, ಚಿಣ್ಣರ ಲೋಕ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿ, ಅಂಕ ಗಳಿಕೆಯಷ್ಟೇ ಶಿಕ್ಷಣದ ಧ್ಯೇಯವಾಗಬಾರದು. ನೈತಿಕ ನೆಲೆಗಟ್ಟು, ಸಾಮಾಜಿಕ ಪ್ರಜ್ಞೆ ಮೂಡಿಸುವಂತಹ ಶಿಕ್ಷಣದ ಅವಶ್ಯಕತೆ ಹೆಚ್ಚಿದೆ. ಇಂದು ಸಮಾಜದಲ್ಲಿ ವಿದ್ಯಾವಂತರು ಹೆಚ್ಚಾಗುತ್ತಿದ್ದಾರೆ. ಆದರೆ, ಅವರಲ್ಲಿ ನೈತಿಕ ಮತ್ತು ಸಾಮಾಜಿಕ ಪ್ರಜ್ಞೆಯ ಕೊರತೆ ಹೆಚ್ಚುತ್ತಿದೆ ಎಂದರು.

ವಿದ್ಯಾರ್ಥಿಗಳಿಗೆ ಕಲಿಕೆಯ ಹಸಿವಿರಬೇಕು. ಸೋಲನ್ನೇ ಗೆಲುವಿನ ಮೆಟ್ಟಿಲನ್ನಾಗಿ ಮಾಡಿಕೊಳ್ಳುವ ಛಲ ಮತ್ತು ಮನೋಬಲ ಇರಬೇಕು. ಕ್ರಮಬದ್ಧ ಅಧ್ಯಯನ, ವಿನಯ, ತಾಳ್ಮೆ, ಪ್ರಾಮಾಣಿಕತೆಯನ್ನು ಅಳವಡಿಸಿಕೊಂಡರೆ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯ. ಮಕ್ಕಳ ಪ್ರತಿಭೆ ಗುರುತಿಸಿ ವೇದಿಕೆ ಕಲ್ಪಿಸುವ ಮಹತ್ತರ ಜವಾಬ್ದಾರಿ ಶಿಕ್ಷಕರದ್ದಾಗಿದೆ ಎಂದರು.

ದೇಶದ ಭವ್ಯ ಪ್ರಜೆಗಳಾದ ವಿದ್ಯಾರ್ಥಿಗಳು ಸರಿಯಾದ ದಾರಿಯಲ್ಲಿ ಸಾಗಬೇಕು.

ಹದಿಹರೆಯದ ವಯಸ್ಸಿನಲ್ಲಿ ದುಶ್ಚಟಕ್ಕೆ ದಾಸರಾಗಬಾರದು. ಅತಿಯಾದ ಮೊಬೈಲ್ ಬಳಕೆಯೂ ಜೀವನವನ್ನು ತಪ್ಪು ದಾರಿಯತ್ತ ಕೊಂಡೊಯ್ಯುತ್ತದೆ. ಆಧುನಿಕ ತಂತ್ರಜ್ಞಾನದ ಸಾಧಕ-ಬಾಧಕ ಅರಿತು ಮುನ್ನಡೆಯಬೇಕೆಂದು ಕಿವಿಮಾತು ಹೇಳಿದರು.

ಕಣಕಟ್ಟೆ ಹೋಬಳಿ ಶಿಕ್ಷಣ ಸಂಯೋಜಕ ಬಿ.ಬಿ.ಸತೀಶ್ ಮಾತನಾಡಿ, ಮಕ್ಕಳಿಗೆ ಶಿಸ್ತನ್ನು ಬಲವಂತವಾಗಿ ಹೇರಬಾರದು. ಪ್ರೀತಿ, ವಿಶ್ವಾಸದಿಂದ ಅವರನ್ನು ಸರಿಯಾದ ಮಾರ್ಗದಲ್ಲಿ ಕರೆದೊಯ್ಯಬೇಕು. ಜೀವನದ ಎಲ್ಲಾ ಕನಸುಗಳನ್ನು ಈಡೇರಿಸಬೇಕಾದರೆ ಪುಸ್ತಕ ಪ್ರೇಮವನ್ನು ಬೆಳೆಸಿಕೊಳ್ಳಬೇಕು. ಪೋಷಕರು ಮಕ್ಕಳಿಗೆ ಪ್ರೋತ್ಸಾಹಿಸಬೇಕು ಎಂದರು.

ಎಸ್‌ಎನ್‌ಎಸ್ ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷ ಅಭಿನವ ಶಿವಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಡಿ.ಎಂ. ಕುರ್ಕೆ ಕ್ಲಸ್ಟರ್‌ನ ಧನಂಜಯ ಮಾತನಾಡಿದರು. ಕಳೆದ ವರ್ಷ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿ ಸಹನ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ಶಾಲಾ ಅಭಿವೃದ್ಧಿ ಸಮಿತಿ ಕಾರ್ಯದರ್ಶಿ ಎಸ್.ಎಂ.ನಂದೀಶ್, ನಿರ್ದೇಶಕರಾದ ಡಿ.ಎಸ್.ಸಿದ್ದಪ್ಪ, ಎಸ್. ಮಲ್ಲಿಕಾರ್ಜುನಪ್ಪ, ಎಂ.ಸಿ.ನಟರಾಜ್, ಎಂ.ಎನ್.ಓಂಕಾರಪ್ಪ , ಶಂಕರನಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶಿವಣ್ಣಸ್ವಾಮಿ, ಮಾಡಾಳು ಶಿವಲಿಂಗಪ್ಪ, ಎಂ.ಡಿ. ಸೋಮಶೇಖರ್, ಮುಖ್ಯ ಶಿಕ್ಷಕ ಸತೀಶ್ ಹಾಗೂ ಮತ್ತಿತರರಿದ್ದರು.

# 1 ಲಕ್ಷ ರೂ. ಬೆಲೆಯ 4 ಹಸು ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಗಡಿನ ಶೆಡ್‌ನಲ್ಲಿ ಕಟ್ಟಿ ಹಾಕಿದ್ದ 4 ಹಾಸುಗಳನ್ನು ಕಳವು ಮಾಡಿರುವ ಘಟನೆ ತಾಲ್ಲೂಕಿನ ಕಾಳನಕೊಪ್ಪಲು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನೇಮಚಂದ್ರ ನಾಯಕ ಎಂಬುವವರಿಗೆ ಸೇರಿದ 1 ಲಕ್ಷ ರೂ. ಮೌಲ್ಯದ ಹಸುಗಳನ್ನು ಕಳವು ಮಾಡಲಾಗಿದೆ. ವ್ಯವಸಾಯ ಮಾಡಿಕೊಂಡಿರುವ ನೇಮಚಂದ್ರ 10 ಹಸುಗಳನ್ನು ಸಾಕಾಣಿಕೆ ಮಾಡಿಕೊಂಡಿದ್ದಾರೆ. ಎಂದಿನಂತೆ ಮನೆ ಪಕ್ಕದ ಶೆಡ್‌ನಲ್ಲಿ ಹಸುಗಳನ್ನು ಕಟ್ಟಿದ್ದರು. ಮಾರನೇ ದಿನ ಬಂದು ನೋಡಿದಾಗ ನಾಲ್ಕು ಹಸುಗಳು ಇಲ್ಲದಿರುವುದು ಗೊತ್ತಾಗಿದೆ. ಸುತ್ತಮುತ್ತಲ ಜಮೀನುಗಳಲ್ಲಿ ಎಷ್ಟೇ ಹುಡುಕಾಡಿದರೂ ಹಸುಗಳು ಸಿಕ್ಕಿಲ್ಲ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಜನವರಿ-27

**1945:** ಆಸ್ವಿಟ್ಜ್ ನಾಜಿ ಕಾರಾಗೃಹವನ್ನು ಮುಕ್ತಗೊಳಿಸಲಾಯಿತು. ಇದರಿಂದ ಈ ದಿನವನ್ನು ಅಂತಾರಾಷ್ಟ್ರೀಯ ಹಾಲೋಕಾಸ್ಟ್ ಸ್ಮರಣಾ ದಿನವಾಗಿ ಆಚರಿಸಲಾಗುತ್ತಿದೆ.

**1967:** ಅಮೆರಿಕದ ಅಪೋಲೊ1 ಯಾನ ಪರೀಕ್ಷೆ ವೇಳೆ ಅಗ್ನಿ ಅವಘಡ, ಮೂವರು ಅಂತರಿಕ್ಷ ಯಾತ್ರಿಗಳು ಪ್ರಾಣ ಕಳೆದುಕೊಂಡರು.

**1996:** ಶ್ರೀಲಂಕಾದಲ್ಲಿ ನಡೆದ ಸೆಂಟ್ರಲ್ ಬ್ಯಾಂಕ್ ಬಾಂಬ್ ದಾಳಿ, ದೇಶದ ಇತಿಹಾಸದಲ್ಲೇ ಭೀಕರ ದಾಳಿಗಳಲ್ಲಿ ಒಂದಾಗಿ ದಾಖಲಾಯಿತು.

### ಜನನ

**1756:** ವೋಲ್ಫ್‌ಗಾಂಗ್ ಅಮಾಡಿಯಸ್ ಮೊಜಾರ್ಟ್, ಜಗತ್ಪ್ರಸಿದ್ಧ ಆಸ್ಟ್ರಿಯನ್ ಸಂಗೀತಗಾರ

**1832:** ಲೂಯಿಸ್ ಕ್ಯಾರೋಲ್, ಅಲಿಸ್ ಇನ್ ವಂಡರ್‌ಲ್ಯಾಂಡ್ ಕೃತಿಯ ಲೇಖಕ

**1885:** ಜೆರೋಮ್ ಕೇ. ಜೆರೋಮ್, ಇಂಗ್ಲಿಷ್ ಲೇಖಕ ಮತ್ತು ಹಾಸ್ಯಗಾರ

**1903:** ಜಾನ್ ಎಕ್ಲೆಸ್, ಆಸ್ಟ್ರೇಲಿಯನ್ ನ್ಯೂರೋಫಿಸಿಯಾಲಜಿಸ್, ನೋಬೆಲ್ ಪುರಸ್ಕೃತ

**1936:** ಟ್ರಾಯ್ ಡೊನಾಹ್ಯೂ, ಅಮೆರಿಕನ್ ಚಲನಚಿತ್ರ ನಟ

### ಮರಣ

**1901:** ಜ್ಯೂಸೆಪ್ಪೆ ವರ್ಡಿ, ಮಹಾನ್ ಇಟಾಲಿಯನ್ ಸಂಗೀತ ಸಂಯೋಜಕ

**1967:** ವರ್ಜಿಲ್ ಆಗಸ್ಟ್ ಗ್ರಿಸಮ್, ಅಮೆರಿಕನ್ ಅಂತರಿಕ್ಷ ಯಾತ್ರಿಕ (ಅಪೋಲೊ1 ದುರಂತ)

**1973:** ಎಡ್ವರ್ಡ್ ಗಿಬ್ಬನ್, ಬ್ರಿಟಿಷ್ ಇತಿಹಾಸಕಾರ

**2010:** ಜೆ.ಡಿ. ಸಲಿಂಜರ್,ಅದಿ ಕ್ಯಾಚರ್ ಇನ್ ದ ರೈಟ ಕಾದಂಬರಿಯ ಲೇಖಕ

# ಯಲಗುಂದ ಸರ್ಕಾರಿ ಶಾಲೆ ಉಳಿವಿಗಾಗಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಕೆಪಿಎಸ್-ಮ್ಯಾಗ್ನೆಟ್ ಹೆಸರಿನಲ್ಲಿ ತಾಲ್ಲೂಕಿನ ಯಲಗುಂದ ಸರ್ಕಾರಿ ಶಾಲೆ ಮುಚ್ಚಲು ಸರ್ಕಾರ ಮುಂದಾಗಿದ್ದು, ಅವೈಜ್ಞಾನಿಕ ನಿರ್ಧಾರದಿಂದ ಹಿಂದೆ ಸರಿಯಬೇಕೆಂದು ಆಗ್ರಹಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ಭಾನುವಾರ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಎಐಡಿಎಸ್‌ಓ ಜಿಲ್ಲಾಧ್ಯಕ್ಷೆ ಚೈತ್ರ ಮಾತನಾಡಿ, ಒಂದು ಬಾರಿ ಶಿಕ್ಷಣ ಇಲಾಖೆ ಸರ್ಕಾರಿ ಶಾಲೆ ಮುಚ್ಚಿದರೆ ಮತ್ತೆ ಎಷ್ಟೇ ಪ್ರಯತ್ನಪಟ್ಟರೂ ಶಾಲೆ ತೆರೆಯಲು ಸಾಧ್ಯವಿಲ್ಲ. ಶಾಲೆಯಲ್ಲಿ ಒಂದು ಮಗು ಇದ್ದರೂ ಶಾಲೆ ಇರಬೇಕು. ಒಬ್ಬ ಶಿಕ್ಷಕರನ್ನು ನೇಮಕ ಮಾಡಬೇಕು. ಒಂದೇ ಒಂದು ಮಗು ಇದ್ದರೂ ಶಾಲೆ ಮುಚ್ಚುವುದಿಲ್ಲ ಎಂದಿರುವ ಶಿಕ್ಷಣ ಸಚಿವರು ಹಿಂಬಾಗಿಲ ಮೂಲಕ ಶಾಲೆಗಳಿಗೆ ಬೀಗ ಹಾಕುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಎಐಡಿಎಸ್‌ಓ ಜಿಲ್ಲಾ ಕಾರ್ಯದರ್ಶಿ ಸುಷ್ಮಾ ಮಾತನಾಡಿ, ಈಗಾಗಲೇ ರಾಜ್ಯಾದ್ಯಂತ ಕೆಪಿಎಸ್-ಮ್ಯಾಗ್ನೆಟ್ ಯೋಜನೆ ವಿರೋಧಿಸಿ ಪೋಷಕರ ಪ್ರತಿಭಟನೆಗಳು ನಡೆಯುತ್ತಿವೆ. ಈ ಯೋಜನೆ ಅಡಿಯಲ್ಲಿ ರಾಜ್ಯಾದ್ಯಂತ 40 ಸಾವಿರ ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿರುವ ಸರ್ಕಾರದ ನಡೆ ಖಂಡನೀಯ. ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಮಕ್ಕಳು ಇಲ್ಲ ಎಂದು ಸರ್ಕಾರ ಹೇಳುತ್ತಿರುವುದು ಶುದ್ಧ ಸುಳ್ಳು. ರಾಜ್ಯದಲ್ಲಿ 37 ಲಕ್ಷ ಮಕ್ಕಳು ಸರ್ಕಾರಿ ಶಾಲೆಗಳಲ್ಲಿ ಓದುತ್ತಿದ್ದಾರೆ. ಆದರೆ, ಸರ್ಕಾರದ ನಿರ್ಲಕ್ಷ್ಯದಿಂದ ಮಕ್ಕಳು ತೊಂದರೆ ಅನುಭವಿಸುವಂತಾಗಿದೆ. ರಾಜ್ಯದಲ್ಲಿ 21 ಸಾವಿರ ಸರ್ಕಾರಿ ಶಾಲಾ ಕಟ್ಟಡಗಳು ಹಲವು ವರ್ಷಗಳಿಂದ ದುರಸ್ತಿ ಕಂಡಿಲ್ಲ.

60,000ಕ್ಕೂ ಅಧಿಕ ಶಿಕ್ಷಕರ ಹುದ್ದೆ ಖಾಲಿ ಇವೆ. ಈ ಸಮಸ್ಯೆ ಬಗೆಹರಿಸುವುದನ್ನು ಬಿಟ್ಟು ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ ಗ್ರಾಮೀಣ ಭಾಗದ ಶಾಲೆಗಳನ್ನು ಮುಚ್ಚಲು ಹೊರಟಿದೆ. ಕರ್ನಾಟಕದ ಜನತೆ ಈ ನೀತಿ ವಿರುದ್ಧ ಗಟ್ಟಿಯಾಗಿ ಹೋರಾಟ ಮಾಡಬೇಕಿದೆ ಹಾಗೂ ಈ ಊರಿನ ಸರ್ಕಾರಿ ಶಾಲೆ ಉಳಿಸಲು ಊರಿನ ಗ್ರಾಮಸ್ಥರು ಮುಂದಾಗಬೇಕು ಎಂದರು.

ಗ್ರಾಮಸ್ಥರಾದ ಆಶಿಕ್, ಬಸವರಾಜು, ಚಂದ್ರಶೇಖರ್ , ದಿನೇಶ್, ಜಗದೀಶ್ ಭಾಗವಹಿಸಿದ್ದರು.

# ಪ್ರತ್ಯೇಕ ಅಪಘಾತದಲ್ಲಿ ಇಬ್ಬರು ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಚನ್ನರಾಯಪಟ್ಟಣ ಸಂಚಾರ ಹಾಗೂ ಜಾವಗಲ್ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟು ಒಬ್ಬರು ಗಾಯಗೊಂಡಿರುವ ಘಟನೆ ನಡೆದಿದೆ.


ಅಪರಿಚಿತ ಕಾರು ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ಚನ್ನರಾಯಪಟ್ಟಣ ತಾಲ್ಲೂಕಿನ ಶೆಟ್ಟಿಹಳ್ಳಿ ಸಮೀಪ ನಡೆದಿದೆ.

ಬೆಂಗಳೂರಿನ ನಾಗರಬಾವಿ ನಿವಾಸಿ ಮಿಥುನ್ (21) ಮೃತ ಯುವಕ. ಹಾಸನದಲ್ಲಿ ಹಮ್ಮಿಕೊಂಡಿದ್ದ ರೋಟರಿ ಕಾರ್ಯಕ್ರಮಕ್ಕಾಗಿ ಬೈಕ್‌ನಲ್ಲಿ ಬಂದಿದ್ದ ಮಿಥುನ್ ಹಾಗೂ ರಾಜೇಶ್ ವಾಪಸ್ ಹೋಗುವಾಗ ಅವಘಡ ಸಂಭವಿಸಿದೆ. ಹಿಂದಿನಿಂದ ವೇಗವಾಗಿ ಬಂದ ಅಪರಿಚಿತ ಕಾರು ಡಿಕ್ಕಿಯಾಗಿ ಇಬ್ಬರೂ ರಸ್ತೆ ಮೇಲೆ ಬಿದ್ದಿದ್ದಾರೆ. ಡಿಕ್ಕಿ ಮಾಡಿದ ವಾಹನ ಚಾಲಕ ನಿಲ್ಲಿಸದೆ ತೆರಳಿದ್ದಾನೆ. ಗಂಭೀರ ಗಾಯಗೊಂಡಿದ್ದ ಮಿಥುನ್ ಸ್ಥಳದಲ್ಲೇ ಮೃತಪಟ್ಟರೆ ಗಾಯಾಳು ರಾಜೇಶ್‌ನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಚನ್ನರಾಯಪಟ್ಟಣ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ರಸ್ತೆಗೆ ಅಡ್ಡಲಾಗಿ ಬಂದ ಹಸುವಿಗೆ ಬೈಕ್ ಡಿಕ್ಕಿಯಾಗಿ ವ್ಯಕ್ತಿ ಮೃತಪಟ್ಟಿರುವ ಘಟನೆ ಬೇಲೂರು ತಾಲ್ಲೂಕಿನ ಹಂದ್ರಾಳು ಗ್ರಾಮದಲ್ಲಿ ನಡೆದಿದೆ.

ಅರೇಹಳ್ಳಿ ಹೋಬಳಿ ನಾಗೇನಹಳ್ಳಿ ಗ್ರಾಮದ ಯೋಗೇಶ್ (51) ಮೃತರು. ಶನಿವಾರ ಸಂಜೆ 4ರ ಬೈಕ್‌ನಲ್ಲಿ ಹೋಗುತ್ತಿದ್ದಾಗ ಏಕಾಏಕಿ ರಸ್ತೆಗೆ ಹಸು ಅಡ್ಡ ಬಂದಿದೆ. ಬೈಕ್ ನಿಯಂತ್ರಣಕ್ಕೆ ಸಿಗದೆ ಯೋಗೇಶ್ ಅವರು ಕೆಳಗೆ ಬಿದ್ದು ತೀವ್ರ ರಕ್ತಸ್ರಾವವಾಗಿ ಮೃತಪಟ್ಟಿದ್ದಾರೆ. ಜಾವಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಎಂಸಿಇ ಕಾಲೇಜಿನಲ್ಲಿ ಗಣರಾಜ್ಯೋತ್ಸವ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭಾರತದ ಸಂವಿಧಾನ ಬಹಳ ಶ್ರೇಷ್ಟವಾಗಿದೆ, ನ್ಯಾಯಾಂಗ, ಕಾರ್ಯಾಂಗ, ಶಾಸಕಾಂಗ, ಪತ್ರಿಕಾ ರಂಗ ಒಳಗೊಂಡಂತೆ ಪ್ರಜಾಪ್ರಭುತ್ವದ ತಳಹದಿ ಮೇಲೆ ಸ್ಥಾಪಿತಗೊಂಡಿದೆ ಎಂದು ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ ಅಧ್ಯಕ್ಷ ಆರ್.ಟಿ.ದ್ಯಾವೇಗೌಡ ಹೇಳಿದರು.

ನಗರದ ಮಲೆನಾಡು ತಾಂತ್ರಿಕ ಕಾಲೇಜಿನಲ್ಲಿ ಸೋಮವಾರ ಏರ್ಪಡಿಸಿದ್ದ 77ನೇ ಗಣರಾಜ್ಯೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿ, 1950ರ ಜ. 26ರಂದು ಭಾರತದಲ್ಲಿ ಗಣರಾಜ್ಯ ಸ್ಥಾಪಿತವಾಗಿದ್ದು, ನಾವು ಸ್ವತಂತ್ರ ರಾಷ್ಟ್ರವಾಗಿ ಐತಿಹಾಸಿಕ ಯುಗವನ್ನು ಪ್ರಾರಂಭಿಸಿದ ದಿನವಾಗಿದೆ ಎಂದರು.

ಗಣರಾಜ್ಯೋತ್ಸವವು ಶಾಂತಿ, ಶಕ್ತಿ, ಏಕತೆ, ಮತ್ತು ಧೈರ್ಯವನ್ನು ಪ್ರತಿಬಿಂಬಿಸುತ್ತದೆ. ಸ್ವಾತಂತ್ರ್ಯ ಹೋರಾಟಗಾರರ ನೆನಪುಗಳನ್ನು ಸ್ಮರಿಸುವ ದಿನವಾಗಿದೆ ಎಂದರು.

ಧ್ವಜಾರೋಹಣ ನೆರವೇರಿಸಿದ ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ ಪ್ರಧಾನ ಕಾರ್ಯದರ್ಶಿ ಚೌಡಳ್ಳಿ ಜಗದೀಶ್ ಮಾತಾನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜಾತಿ, ಮತ, ಕಾನೂನು ಸಮಾನತೆಯನ್ನು ಒಗ್ಗೂಡಿಸುವ ರಚನಾತ್ಮಕ ಸಂವಿಧಾನ ನಮ್ಮದು ಎಂದರು.

ಪ್ರಾಂಶುಪಾಲ ಡಾ. ಹೆಚ್ .ಎ.ಅಮರೇಂದ್ರ, ಸಂಸ್ಥೆ ಖಜಾಂಚಿ ಹೆಚ್.ಡಿ.ಪಾರ್ಶ್ವನಾಥ್, ನಿರ್ದೇಶಕರಾದ ಬಿ.ಆರ್. ರಾಜಶೇಖರ್, ಶಾಂತಿಗ್ರಾಮ ಶಂಕರ್, ಕಾಲೇಜು ನಿರ್ದೇಶಕರಾದ ಡಾ. ಎಸ್.ಪ್ರದೀಪ್, ಕಾಲೇಜು ದೈಹಿಕ ಶಿಕ್ಷಣ ನಿರ್ದೇಶಕ ಸೋಮಶೇಖರ್ ಉಪಸ್ಥಿತರಿದ್ದರು. ಮಲೆನಾಡು ಎಂಜಿನಿಯರಿಂಗ್ ಕಾಲೇಜು ನೌಕರರ ಸಂಘದ ಸ್ಟಾಫ್ ಕ್ಲಬ್ ಕಾರ್ಯದರ್ಶಿ ಡಾ. ಕೀರ್ತಿ ಸ್ವಾಗತಿಸಿದರು. ನೌಕರರ ಕಲ್ಯಾಣ ಸಂಘದ ಕಾರ್ಯದರ್ಶಿ ಜಿ.ಪಾಂಡುಕುಮಾರ್ ವಂದಿಸಿದರು.

# ಜಿಲ್ಲಾ ಪತ್ರಕರ್ತರ ಸಂಘದಲ್ಲಿ ಗಣರಾಜ್ಯೋತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿ ಆವರಣದಲ್ಲಿ ಸೋಮವಾರ ಏರ್ಪಡಿಸಿದ್ದ 77ನೇ ಗಣರಾಜ್ಯೋತ್ಸವ ಧ್ವಜಾರೋಹಣವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಾಧ್ಯಮ ನಾಲ್ಕನೇ ಸ್ತಂಭ ಎನಿಸಿಕೊಂಡಿದ್ದು, ಸಮಾಜದ ಹಿತ ಕಾಪಾಡುವ ಗುರುತರ ಜವಾಬ್ದಾರಿ ಮಾಧ್ಯಮದ ಮೇಲಿದೆ. ಸಮಾಜದ ಸ್ವಾಸ್ಥ್ಯ ಕಾಪಾಡುವುದು ಮಾಧ್ಯಮಗಳ ಹೊಣೆಗಾರಿಕೆ. ಅದರಿಂದ ಜಿಲ್ಲೆ, ರಾಜ್ಯಕ್ಕೆ, ಸಮಾಜಕ್ಕೆ ಒಳ್ಳೆಯದಾಗಲಿದೆ ಎಂದರು.

ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಮಾತನಾಡಿ, ಜ. 26 ಭಾರತಕ್ಕೆ ಪವಿತ್ರವಾದ ದಿನ. ಎಲ್ಲರೂ ಸಂವಿಧಾನದ ಆಶಯದಂತೆ ಶಾಂತಿ, ಸಹಬಾಳ್ವೆ, ಸಾಮರಸ್ಯದಿಂದ ಮುನ್ನಡೆಯೋಣ ಎಂದರು. ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವ ವಂದನೆ ಸಲ್ಲಿಸಿದರು. ಸಂಘದ ಕಾರ್ಯದರ್ಶಿ ಕೆ.ಎಂ.ಹರೀಶ್ ಎಲ್ಲರನ್ನೂ ಸ್ವಾಗತಿಸಿದರು. ಉಪಾಧ್ಯಕ್ಷ ಜಿ.ಪ್ರಕಾಶ್ ವಂದಿಸಿದರು. ಕೆಯೂಡಬ್ಲ್ಯೂಜೆ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್.ಪ್ರಮೋದ್, ಜಿಲ್ಲಾ ಸಂಘದ ಉಪಾಧ್ಯಕ್ಷರಾದ ಎನ್ .ನಂಜುಂಡೇಗೌಡ, ಹೆಚ್.ಟಿ.ಮೋಹನ್ ಕುಮಾರ್, ಮಾಜಿ ಅಧ್ಯಕ್ಷರಾದ ರವಿ ನಾಕಲಗೂಡು, ಬಿ.ಆರ್. ಉದಯಕುಮಾರ್, ಲೀಲಾವತಿ, ಕೆ.ಹೆಚ್.ವೇಣುಕುಮಾರ್, ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಕಾರ್ಯಕಾರಿ ಸಮಿತಿ ಸದಸ್ಯರಾದ ಸಿ.ಆರ್.ಜಗದೀಶ್, ಪ್ರಸನ್ನ ಕುಮಾರ್ (ಚಲಂ), ನಟರಾಜ್, ಸ್ಕೌಟ್ಸ್ ಅಂಡ್ ಗೈಡ್ಸ್ ವಲಯ ಸಂಚಾಲಕಿ ವಿ.ಎಸ್.ರಾಣಿ ಹಾಗೂ ಪತ್ರಕರ್ತರು ಹಾಜರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248